## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಾಮಾಜಿಕವಾಗಿ ಮುಂದುವರೆದ ವ್ಯಕ್ತಿಗಳು/ವರ್ಗಗಳನ್ನು (ಕೆನೆಪದರ) ಹಿಂದುಳಿದ ವರ್ಗಗಳ ಮೀಸಲಾತಿಯಿಂದ ಹೊರತು ಪಡಿಸಲು ಕೆನೆಪದರ ನೀತಿಯ ವಾರ್ಷಿಕ ಆದಾಯ ಮಿತಿಯನ್ನು ರೂ.3.50 ಲಕ್ಷಗಳಿಂದ ರೂ.4.50 ಲಕ್ಷಗಳಿಗೆ ಹೆಚ್ಚಿಸುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ:30.03.2002.
2) ಸರ್ಕಾರದ ಆದೇಶ ಸಂಖ್ಯೆ: ಸಕಇ 104 ಬಿಸಿಎ 2011, ದಿನಾಂಕ:06.02.2012.
3) ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಏಕಕಡತ ಪ್ರಸ್ತಾವನೆ ಸಂಖ್ಯೆ:ಹಿಂವಕಇ/ಮಾಶಾ:ಸಿಆರ್-7/2013-14, ದಿನಾಂಕ:22-07-2013.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದ ಅನುಬಂಧ-II ರ ಅಂಶ-3 ರಲ್ಲಿ ಕೆನೆಪದರವನ್ನು ನಿರ್ಣಯಿಸಲು ಹಿಂದುಳಿದ ವರ್ಗಗಳ ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಗಳಿಗೆ ಅನ್ವಯಿಸುವಂತೆ ವಾರ್ಷಿಕ ಆದಾಯ ಮಿತಿಯನ್ನು ರೂ.2.00 ಲಕ್ಷಗಳಿಗೆ ನಿಗದಿಗೊಳಿಸಲಾಗಿದೆ. ತದನಂತರ ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಆದೇಶದಲ್ಲಿ ಒಟ್ಟು ವಾರ್ಷಿಕ ಆದಾಯ ಮಿತಿಯನ್ನು (Gross Income) ಮಿತಿಯನ್ನು ರೂ.2.00 ಲಕ್ಷಗಳಿಂದ ರೂ.3.50 ಲಕ್ಷಗಳಿಗೆ ಹೆಚ್ಚಿಸಿ ನಿಗದಿಗೊಳಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಏಕಕಡತ ಮುಖೇನ ಪ್ರಸ್ತಾವನೆಯನ್ನು ಸಲ್ಲಿಸಿ ಸಾಮಾಜಿಕವಾಗಿ ಮುಂದುವರೆದ ವ್ಯಕ್ತಿಗಳು/ವರ್ಗಗಳನ್ನು ಕೆನೆಪದರ ಹಿಂದುಳಿದ ವರ್ಗಗಳ ಮೀಸಲಾತಿಯಿಂದ ಹೊರತುಪಡಿಸಲು ಕೆನೆಪದರ ನೀತಿಯ ವಾರ್ಷಿಕ ಆದಾಯ ಮಿತಿಯನ್ನು ರೂ.3.50 ಲಕ್ಷಗಳಿಂದ ರೂ.4.50 ಲಕ್ಷಗಳಿಗೆ ಹೆಚ್ಚಿಸಲು ಪ್ರಸ್ತಾವಿಸಿರುತ್ತಾರೆ.

ಮುಂದುವರೆದು ಇತ್ತೀಚಿನ ವರ್ಷಗಳಲ್ಲಿ ಆಗಿರುವ ಹಣದುಬ್ಬರನ್ನು ಗಮನದಲ್ಲಿರಿಸಿಕೊಂಡು ಹಿಂದುಳಿದ ವರ್ಗಗಳ ಬಡವರಿಗೆ ಹೆಚ್ಚಿನ ಅನುಕೂಲಗಳನ್ನು ಕಲ್ಪಿಸುವ ಹಿತದೃಷ್ಟಿಯಿಂದ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವಿಶೇಷ ವರದಿ ಸಂಖ್ಯೆ:01/2009 ನ್ನು ಸರ್ಕಾರಕ್ಕೆ ಸಲ್ಲಿಸಿ ಪ್ರಸ್ತುತ ಚಾಲ್ತಿಯಲ್ಲಿರುವ ಕೆನೆಪದರ ಆರ್ಥಿಕ ನೀತಿಯನ್ನು ಕೇಂದ್ರ ಸರ್ಕಾರ ಪರಿಷ್ಕರಿಸಿದ ಹಿನ್ನೆಲೆಯಲ್ಲಿ ರಾಜ್ಯದಲ್ಲಿಯೂ ಸಹ ಹೆಚ್ಚಿಸುವ ಬಗ್ಗೆ ಆಯೋಗವು ತನ್ನ 147ನೇ ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಿ ಕೇಂದ್ರ ಸರ್ಕಾರವು ಹಿಂದುಳಿದ ವರ್ಗಗಳ ಮೀಸಲಾತಿ ಸಂಬಂಧ ಇರುವ ಆದಾಯ ಮಿತಿಯನ್ನು ಈಗಾಗಲೇ ಪರಿಷ್ಕರಿಸಿರುವಂತೆ ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಪ್ರವರ್ಗ-2ಎ, 2ಬಿ, 3ಎ & 3ಬಿ ಗಳಿಗೆ ಅನ್ವಯವಾಗುವಂತೆ ರಾಜ್ಯದ ಕೆನೆಪದರ ಆದಾಯದ ಮಿತಿಯನ್ನು ರೂ.4.50 ಲಕ್ಷಗಳಿಗೆ ನಿಗಧಿಪಡಿಸಿ ಆದೇಶ ಹೊರಡಿಸುವಂತೆ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸರ್ವಾನುಮತದಿಂದ ನಿರ್ಣಯಿಸಿ ಶಿಫಾರಸ್ಸು ಮಾಡಿರುವ ಹಿನ್ನೆಲೆಯಲ್ಲಿ ಕೆನೆಪದರ ನೀತಿಯ ವಾರ್ಷಿಕ ಆದಾಯ ಮಿತಿಯನ್ನು ರೂ.3.50 ಲಕ್ಷಗಳಿಂದ ರೂ.4.50 ಲಕ್ಷಗಳಿಗೆ ಹೆಚ್ಚಿಸಲು ಸರ್ಕಾರ ತೀರ್ಮಾನಿಸಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 192 ಬಿಸಿಎ 2013, ಬೆಂಗಳೂರು, ದಿನಾಂಕ:04.09.2013**

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರಿ ಆದೇಶ ಸಂಖ್ಯೆ:ಸಕಇ 225 ಬಿಸಿಎ 2000, ದಿನಾಂಕ:30.03.2002ರ ಅನುಬಂಧ-II ರ ಅಂಶ-3 ರಲ್ಲಿ ಹಿಂದುಳಿದ ವರ್ಗಗಳ ಪ್ರವರ್ಗ 2ಎ, 2ಬಿ,

3ಎ ಮತ್ತು 3ಬಿ ಗಳಿಗೆ ಅನ್ವಯಿಸುವಂತೆ ಕೆನೆಪದರಕ್ಕೆ ನಿಗಧಿಪಡಿಸಿರುವ ಅಭ್ಯರ್ಥಿಯ ಮತ್ತು ಅವರ ತಂದೆ-ತಾಯಿ/ಪೋಷಕರ ವಾರ್ಷಿಕ ಒಟ್ಟು ಆದಾಯ ಮಿತಿಯನ್ನು (Gross Income) ರೂ.3.50 ಲಕ್ಷಗಳಿಂದ ರೂ.4.50 ಲಕ್ಷಗಳಿಗೆ ಈ ತಕ್ಷಣವೇ ಜಾರಿಗೆ ಬರುವಂತೆ ಹೆಚ್ಚಿಸಿ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ:ಸಕಇ 225 ಬಿಸಿಎ 2000, ದಿನಾಂಕ:30.03.2002 ರಲ್ಲಿರುವ ಇತರೇ ಷರತ್ತುಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 585 ವೆಚ್ಚ-3/13 ದಿನಾಂಕ:03.09.2009 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಚಿಕ್ಕೇಗೌಡ)
ಸರ್ಕಾರದ ಉಪ ಕಾರ್ಯದರ್ಶಿ
ಹಿಂದುಳಿದ ವರ್ಗಗಳಕಲ್ಯಾಣ ಇಲಾಖೆ

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು-ಇವರಿಗೆ ಮುಂದಿನ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 1000 ಪ್ರತಿಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸೌಧ, ಇವರಿಗೆ ಕಳುಹಿಸಲು ಕೋರಿದೆ.

ಪ್ರತಿ:
1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು
4. ಎಲ್ಲಾ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
5. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
6. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
7. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
8. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
9. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ (ನಿ),
10. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ಬೆಂಗಳೂರು.
11. ಎಲ್ಲಾ ಜಿಲ್ಲೆಯ ಉಪವಿಭಾಗಗಳ -ಸಹಾಯಕ ಆಯುಕ್ತರು.
12 ಎಲ್ಲಾ-ತಾಲ್ಲೂಕು ತಹಶೀಲ್ದಾರರುಗಳು
13. ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು.
14. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
15. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
16. ಸರ್ಕಾರದ ಉಪಕಾರ್ಯದರ್ಶಿ ಇವರ ಆಪ್ತ ಸಹಾಯಕರು.
17. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.